# ನಾಡಿದ್ದು ಎನ್ಐಟಿಕೆ ಘಟಿಕೋತ್ಸವ

**ಮಂಗಳೂರು:** ಸುರತ್ಕಲ್ ಎನ್ಐಟಿಕೆಯ 22ನೇ ವಾರ್ಷಿಕ ಘಟಿಕೋತ್ಸವ ನ.23ರಂದು ಸಂಸ್ಥೆಯ ಸಿಲ್ವರ್ ಜುಬಿಲಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಸ್ನಾತಕೋತ್ತರ(ಪಿಜಿ) ಮತ್ತು ಪಿಎಚ್.ಡಿ ವಿದ್ಯಾರ್ಥಿಗಳಿಗೆ ಬೆಳಗ್ಗೆ 10ರಿಂದ ಮಧ್ಯಾಹ್ನ 1ರವರೆಗೆ ಮತ್ತು ಯುಜಿ ವಿದ್ಯಾರ್ಥಿಗಳಿಗೆ ಮಧ್ಯಾಹ್ನ 3ರಿಂದ ಪದವಿ ಪ್ರದಾನ ಮಾಡಲಾಗುವುದು.ಸ್ನಾತಕೋತ್ತರ ವಿಭಾಗದ ಘಟಿಕೋತ್ಸವದಲ್ಲಿ ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆ ನಿರ್ದೇಶಕ ಪ್ರೊ.ಗೋವಿಂದನ್ ರಂಗರಾಜನ್ ಮತ್ತು ಸಿಕಂದರಾಬಾದ್‌ನ ಕಿಮ್ಸ್ ಫೌಂಡೇಶನ್ ಮತ್ತು ರಿಸರ್ಚ್ ಸೆಂಟರ್ ಅಧ್ಯಕ್ಷ ಡಾ.ಭುಜಂಗ ರಾವ್ ಗೌರವ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಎನ್ಐಟಿಕೆ ನಿರ್ದೇಶಕ ಪ್ರೊ.ಬಿ.ರವಿ ಬುಧವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಯುಜಿ ಘಟಿಕೋತ್ಸವದಲ್ಲಿ ಬಾಹ್ಯಾಕಾಶ ಆಯೋಗದ ಸದಸ್ಯ ಎ.ಎಸ್.ಕಿರಣ್ ಕುಮಾರ್ ಮತು ಜೋಧಪುರದ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ನಿರ್ದೇಶಕ ಪ್ರೊ.ಅವಿನಾಶ್ ಕುಮಾರ್ ಅಗರ್ವಾಲ್ ಭಾಗವಹಿಸಲಿದ್ದಾರೆ. ಘಟಿಕೋತ್ಸವದಲ್ಲಿ ಒಟ್ಟು 2,078 ವಿದ್ಯಾರ್ಥಿಗಳು ಪದವಿ ಸ್ವೀಕರಿಸಲಿದ್ದಾರೆ ಎಂದರು. ಎನ್ಐಟಿಕೆ ಪ್ರೊ. ಅರುಣ್ ಇಸ್ಲೂರು, ಪ್ರೊ.ಸೈದಕಗಗ ದತ್ತ, ಪಿಆರ್‌ಒ ವೈಷ್ಣವಿ ಉಪಸ್ಥಿತರಿದ್ದರು.

Vijayavani, Date:21/11/24, p, no - 05